ಕೆಲಸವನ್ನು ತೆಗೆದುಕೊಂಡಿರುವುದಿಲ್ಲ.

ಆ) ಉದ್ಭವಿಸುವುದಿಲ್ಲ.

ವಿಷಯ:- ಮೈಸೂರಿನಲ್ಲಿ ಹೆಣ್ಣು ಮಕ್ಕಳ ವಿಧ್ಯಾರ್ಥಿ ನಿಲಯಕ್ಕೆ ಅಧಿಕ ಬೇಡಿಕೆ.

1411 (2252) **ಶ್ರೀ ಸಿ.ಹೆಚ್. ವಿಜಯಶಂಕರ (ಹುಣಸೂರು):-** ಮಾನ್ಯ ಹಿಂದುಳಿದ ವರ್ಗಗಳ ಮತ್ತು ಅಲ್ಪ ಸಂಖ್ಯಾತರ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಶೈಕ್ಷಣಿಕ ಮತ್ತು ಜಿಲ್ಲಾ ಕೇಂದ್ರ ಸ್ಥಾನವಾಗಿರುವ ಮೈಸೂರಿನಲ್ಲಿ ಅಧಿಕ ಬೇಡಿಕೆಯಿದ್ದರೂ ಕೇವಲ 75 ಮಕ್ಕಳಿಗೆ ಪ್ರವೇಶಾವಕಾಶವಿರುವ ಹಿಂದುಳಿದ ವರ್ಗಗಳ ಹೆಣ್ಣುಮಕ್ಕಳ ವಿದ್ಯಾರ್ಥಿ ನಿಲಯ ಮಾತ್ರ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಕಳೆದ ಸಾಲಿನಲ್ಲಿಯೇ, 50 ಸಂಖ್ಯಾ ಬಲದ ಕಾಲೇಜು ಹೆಣ್ಣು ಮಕ್ಕಳ ಹಿಂದುಳಿದ ವರ್ಗಗಳ ವಿದ್ಯಾರ್ಥಿನಿಲಯವನ್ನು ಪ್ರಾರಂಭಿಸಲು ಅನುಮೋದನೆ ಸಿಕ್ಕಿದ್ದು, ಜಾಗವಿದ್ದರೂ ಈವರೆಗೆ ಕಟ್ಟಡದ ನಿರ್ಮಾಣ ಕಾರ್ಯ ಪ್ರಾರಂಭಗೊಳ್ಳದಿರಲು ಕಾರಣಗಳೇನು?

ಇ) ಅಧಿಕ ಬೇಡಿಕೆಯನ್ನು ಗಮನದಲ್ಲಿಟ್ಟುಕೊಂಡು ಜರೂರಾಗಿ ಈ ಕಟ್ಟಡವನ್ನು ನಿರ್ಮಾಣ ಮಾಡಲು ಸರ್ಕಾರದವರು ಕ್ರಮ ಕೈಗೊಳ್ಳುವರೇ?

ಶ್ರೀ ಮಾಲೀಕಯ್ಯ ಗುತ್ತೇದಾರ್ (ಹಿಂದುಳಿದ ವರ್ಗಗಳು ಮತ್ತು ಅಲ್ಪ ಸಂಖ್ಯಾತರ ಕಲ್ಯಾಣ ಸಚಿವರು):-

ಅ) ಹೌದು.

ಆ) ಕಟ್ಟಡ ನಿರ್ಮಾಣಕ್ಕೆ ಪ್ರಸ್ತಾವನೆ ಕಳಿಸಿಕೊಡಲು ಕೋರಲಾಗಿದೆ. ಶೀಘ್ರದಲ್ಲಿಯೇ ನಿರ್ಮಾಣ ಕಾರ್ಯ ಪ್ರಾರಂಭಿಸಲಾಗುವುದು.

ಇ) ಹೌದು.

ವಿಷಯ:- ಮೈಸೂರು ನಗರದ ಬಂಡಿಪಾಳ್ಯ ಹಾಗೂ ಆರ್.ಎಂ.ಸಿ. ಮುಂಭಾಗದಲ್ಲಿ ಟ್ರಕ್ ಟರ್ಮಿನಲ್.

1412 (2345) **ಶ್ರೀ ವಿ. ಮಾರುತಿರಾವ್ ಪವಾರ್ (ನರಸಿಂಹರಾಜಪುರ):-** ಮಾನ್ಯ ಪೌರಾಡಳಿತ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಬೆಳೆಯುತ್ತಿರುವ ಮೈಸೂರು ನಗರದ ಬಂಡಿಪಾಳ್ಯ ಆರ್.ಎಂ.ಸಿ. ಮುಂಭಾಗ ಟ್ರಕ್ಕುಗಳ ಟರ್ಮಿನಲ್ ನಿರ್ಮಾಣ ಮಾಡುವ ಯೋಜನೆ ಸರ್ಕಾರಕ್ಕೆ ಇದೆಯೇ?

ಆ) ಇಲ್ಲದಿದ್ದಲ್ಲಿ ಆವಶ್ಯಕತೆಯನ್ನು ಪರಿಗಣಿಸಿ ತಂಗುದಾಣ ನಿರ್ಮಾಣ ಮಾಡಲು ಸರ್ಕಾರವು ಕ್ರಮ ಕೈಗೊಳ್ಳುವುದೇ?

ಶ್ರೀ ಮಿರಾಜುದ್ದೀನ್ ಎನ್. ಪಟೇಲ್ (ಪೌರಾಡಳಿತ ರಾಜ್ಯ ಸಚಿವರು):-

ಅ) ಇದೆ.

ಆ) ಈಗಾಗಲೇ ಇದಕ್ಕಾಗಿ ಭೂಸ್ವಾಧೀನ ನಡವಳಿ ಪ್ರಾರಂಭವಾಗಿದ್ದು, ಮುಂದಿನ ನಡವಳಿಗಳು ನಡೆಯುತ್ತಿದೆ.

ವಿಷಯ:- ಹುಣಸೂರಿನಲ್ಲಿ ಹಿಂದುಳಿದ ವರ್ಗಗಳ ಕಾಲೇಜು ವಿದ್ಯಾರ್ಥಿ ನಿಲಯಕ್ಕೆ ಹೊಸ ಕಟ್ಟಡ.

1413 (2253) **ಶ್ರೀ ವಿಜಯಶಂಕರ ಸಿ.ಹೆಚ್. (ಹುಣಸೂರು):-** ಮಾನ್ಯ ಹಿಂದುಳಿದ ವರ್ಗಗಳ ಮತ್ತು ಅಲ್ಪ ಸಂಖ್ಯಾತರ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಹುಣಸೂರು ಪಟ್ಟಣದ ಹಿಂದುಳಿದ ವರ್ಗಗಳ ಕಾಲೇಜು ವಿದ್ಯಾರ್ಥಿ ನಿಲಯಕ್ಕೆ ಹೊಸದಾಗಿ ಕಟ್ಟಡ ಕಟ್ಟುವ ವಿಚಾರ ಸರ್ಕಾರದ ಗಮನದಲ್ಲಿದೆಯೇ?

ಆ) ಹಾಗಿದ್ದಲ್ಲಿ ಈಗಾಗಲೇ ತಯಾರಿಸಿರುವ ಅಂದಾಜನ್ನು ಒಪ್ಪಿಗೆ ಕೊಡಲಾಗುವುದೇ?

ಇ) ಹಾಗಿದ್ದಲ್ಲಿ ಈ ಕಾಮಗಾರಿಗಳನ್ನು ಎಂದಿನಿಂದ ಪ್ರಾರಂಭಿಸಲಾಗುವುದು?

ಶ್ರೀ ಮಾಲೀಕಯ್ಯ ವಿ. ಗುತ್ತೇದಾರ್ (ಅಲ್ಪಸಂಖ್ಯಾತರ ಕಲ್ಯಾಣ ಸಚಿವರು):-

ಅ) ಹೌದು.

ಆ) ಉದ್ದೇಶಿತ ಕಟ್ಟಡದ ನಕ್ಷೆ ಮತ್ತು ಅಂದಾಜುಗಳನ್ನು ಕಳುಹಿಸಿಕೊಡಲು ಜಿಲ್ಲಾಧಿಕಾರಿಗಳನ್ನು ಕೋರಲಾಗಿದ್ದು, ಅವುಗಳನ್ನು ಪಡೆದ ನಂತರ ಪರಿಶೀಲಿಸಲಾಗುವುದು.

ಇ) ಆಡಳಿತಾತ್ಮಕ ಅನುಮೋದನೆ ನೀಡಿದ ನಂತರ ಕಾಮಗಾರಿಗಳನ್ನು ಪ್ರಾರಂಭಿಸಲಾಗುವುದು.

ಅಧ್ಯಕ್ಷರು:- ಉತ್ತರಗಳನ್ನು ಸಭೆಯ ಮುಂದೆ ಮಂಡಿಸಲಾಯಿತು. ನಾರಾಯಣಪುರ ಕೆನಾಲ್ ಬಗ್ಗೆ ನೋಟೀಸನ್ನು ಕೊಟ್ಟಿದ್ದಾರೆ.

ಶ್ರೀ ಎಂ. ಮಲ್ಲಿಕಾರ್ಜುನ ಖರ್ಗೆ:- ಮಾನ್ಯ ಅಧ್ಯಕ್ಷರೇ, ಅದಕ್ಕಿಂತ ಮುಂಚೆ ನಾನು ಅರ್ಧ ಗಂಟೆ ಕಾಲದ ಚರ್ಚೆಗೆ ಸಂಬಂಧಪಟ್ಟಂತೆ ಕೇಳಿದ್ದೆ. ಅಡ್ಜರ್ನ್‌ಮೆಂಟ್ ಮೋಷನ್ ವಿಚಾರವನ್ನು ತೆಗೆದುಕೊಳ್ಳುವುದಾದರೆ ನನ್ನದೇನೂ ಅಭ್ಯಂತರವಿಲ್ಲ.

ಅಧ್ಯಕ್ಷರು :- ಪ್ರಿಲಿಮಿನರಿ ಸಬ್ಮಿಷನೆ ಆದರೆ ಬೇಗ ಮುಗಿಸಲಿ.

ಶ್ರೀ ಎಂ. ಮಲ್ಲಿಕಾರ್ಜುನ ಖರ್ಗೆ:- ಅಡ್ಜರ್ನ್‌ಮೆಂಟ್ ಮೋಷನ್‌ಗೆ ನೋಟೀಸನ್ನು ಕೊಡದೇ ಇದ್ದಾಗಲೂ ಕೂಡ, ಜೀರೋ ಅವರ್‌ನಲ್ಲಿ ಪ್ರಸ್ತಾಪ ಮಾಡಿರತಕ್ಕದ್ದು ಇದೆ. ಇವತ್ತು ಅಡ್ಮಿನಿಸ್ಟ್ರೇಷನ್ನೇ ಕೊಲ್ಯಾಪ್ಸ್ ಆಗುವಂಥ ಪರಿಸ್ಥಿತಿ ಇದೆ. ಆ ದೃಷ್ಟಿಯಿಂದ ನಾನು ಪ್ರಸ್ತಾಪ ಮಾಡುತ್ತಿದ್ದೇನೆ.